**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಉತ್ತರ**

ವಿಷಯ: ದಿನಾಂಕ: **10.03.2025** ರಂದು ವಿಜಯವಾಣಿ ದಿನ ಪತ್ರಿಕೆಯಲ್ಲಿ ಪ್ರಕಟವಾಗಿರುವ ರಾಜ್ಯದಲ್ಲಿ ಯುವಕರು ಮಾದಕ ವ್ಯಸನಿಗಳು ಹೆಚ್ಚು ತುತ್ತಾಗುತ್ತಿದ್ದಾರೆ. ಕೆಲಸದಿಂದ ತೆಗೆದು ಹಾಕಿದ್ದಕ್ಕೆ ಬೇಸರಗೊಂಡು, ಇಲ್ಲವೆ ಇನ್ನಿತರ ಕಾರಣಗಳಿಗೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುದ್ದನ್ನು ಗಮನಿಸಬಹುದು.

ಯಶವಂತಪುರ ರೈಲ್ವೆ ಪ್ಯಾರಲಲ್ ರಸ್ತೆ ನಿವಾಸಿ ಸುನೀಲ್‌ಕುಮಾರ್ ಅವರು ದುಶ್ಚಟಕ್ಕೆ ಬಲಿಯಾಗಿದ್ದಾರೆ. ಕೊತ್ತನೂರಿನ ಡಿಎನ್‌ಬಿ ರೆಡ್ಡಿ ಲೇಔಟ್‌ನ ಪಿಜಿಯಲ್ಲಿ ಘಟನೆ ನಡೆದಿದೆ. ಇವರ ಸಹೋದರ ಅರುಣ್‌ಕುಮಾರ್ ನೀಡಿದ ದೂರಿನ ಮೇರೆಗೆ ಪೊಲೀಸರು ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡು, ತನಿಖೆ ಕೈಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸುನೀಲ್‌ಕುಮಾರ್ ಪದವೀಧರನಾಗಿದ್ದು, ಮದ್ಯ ಮತ್ತು ಮಾದಕ ವಸ್ತು ವ್ಯಸನಿಗಳಾಗಿದ್ದ, ಹೀಗಾಗಿ ಮನೆಯವರು ಆತನಿಗೆ ಹಣ ಕೊಡುತ್ತಿರಲಿಲ್ಲ. ವೃತ್ತಿಯಲ್ಲಿ ಮೆಕಾನಿಕ್ ಆಗಿದ್ದ ಆತ, ನಾಲ್ಕೈದು ತಿಂಗಳಿನಿಂದ ಕೊತ್ತನೂರು ಗ್ಯಾರೆಜ್‌ವೊಂದರಲ್ಲಿ ಕೆಲಸ ಮಾಡಿಕೊಂಡಿದ್ದ, ಸಮೀಪದ ಪಿಜಿಯಲ್ಲಿ ವಾಸವಾಗಿದ್ದ. ಕೆಲ ದಿನಗಳ ಹಿಂದೆ ಗ್ಯಾರೆಜ್‌ನಲ್ಲಿದ್ದ ಸಾವಿರಾರು ರೂ.ಮೌಲ್ಯದ ಕಾಪರ್ ವೈರ್‌ಗಳನ್ನು ಕದಿದ್ದಕ್ಕೆ ಮಾಲೀಕರು ಕೆಲಸದಿಂದ ತೆಗೆದುಕೊದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ/

ಕೆಲಸದಿಂದ ತೆಗೆದುಹಾಕಿದ್ದಕ್ಕೆ ನೊಂದಿದ್ದ ಸುನೀಲ್ ಮಾ 7 ರಂದು ಬೆಳಗ್ಗೆ ಗ್ಯಾರೆಜ್ ಮಾಲೀಕನಿಗೆ ನನ್ನ ಕ್ಷಮಿಸಿ ಅಣ್ಣ ..... ಎಂದು ಸಂದೇಶ ಕಳುಹಿಸಿ ಪಿಜಿಯಲ್ಲೇ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಇಂತಹ ದುಶ್ಚಟಕ್ಕೆ ನೂರಾರು ಯುವಕರು ಬಲಿಯಾಗುತ್ತಿದ್ದಾರೆ. ವಿದ್ಯಾವಂತರು ದುಶ್ಚಟಕ್ಕೆ ಒಳಗಾಗುತ್ತಿರುವ ಹಿನ್ನೆಲೆಯಲ್ಲಿ ಪೋಷಕರು ನಿಗಾವಹಿಸಬೇಕು. ಗೃಹ ಇಲಾಖೆಯು ಪ್ರಕರಣಗಳನ್ನು ಪತ್ತೆ ಹಚ್ಚಿ, ಯುವಕರನ್ನು ಕೌನ್ಸಿಲಿಂಗ್‌ಗೆ ಒಳಪಡಿಸಬೇಕು. ಇದಕ್ಕೆ ಸರ್ಕಾರವು ಪ್ರತ್ಯೇಕವಾಗಿ ಕಾರ್ಯಕ್ರಮ ರೂಪಿಸಿ, ಯುವಕರಿಗೆ ಜೀವನದ ಮಹತ್ವವನ್ನು ತಿಳಿಸಬೇಕೆಂದು ಸರ್ಕಾರವನ್ನು ಶೂನ್ಯವೇಳೆಯಲ್ಲಿ ಒತ್ತಾಯಿಸುತ್ತಿದ್ದೇನೆ.

ಉತ್ತರ:

- ಬೆಂಗಳೂರು ನಗರದ ಯಶವಂತಪುರ ರೈಲ್ವೆ ಪ್ಯಾರಲಲ್ ರಸ್ತೆ ನಿವಾಸಿ ಸುನೀಲ್‌ಕುಮಾರ್ ಎಂಬುವವರ ಆತ್ಮಹತ್ಯೆ ಪ್ರಕರಣದ ವಿವರಗಳು:

ಈ ಪ್ರಕರಣದಲ್ಲಿ ಪಿರ್ಯಾದುದಾರರಾದ ಶ್ರೀ ಅರುಣ ಕುಮಾರ. ಆರ್ ಬಿನ್ ಲೇ॥ವಿ.ರಮೇಶ್, 28 ವರ್ಷ, #8/1, ರೈಲ್ವೆ ಪ್ಯಾರಲಲ್ ರಸ್ತೆ, ಯಶವಂತಪುರ, ಬೆಂಗಳೂರು ಇವರು ಠಾಣೆಗೆ ಹಾಜರಾಗಿ ನೀಡಿದ ದೂರಿನಲ್ಲಿ ಸದರಿ ವಿಳಾಸದಲ್ಲಿ ಹುಟ್ಟಿದಾಗಿನಿಂದಲೂ ಕುಟುಂಬದೊಂದಿಗೆ ವಾಸವಾಗಿದ್ದು, ಜೀವನೋಪಾಯಕ್ಕೆ ಎಲೆಕ್ಟ್ರಿಷಿಯನ್ ಕೆಲಸ ಮಾಡಿಕೊಂಡಿರುತ್ತೇನೆಂದು ತಿಳಿಸಿರುತ್ತಾರೆ. ದೂರುದಾರರ ತಂದೆ-ತಾಯಿಗೆ ಒಟ್ಟು 04 ಜನ ಗಂಡು ಮಕ್ಕಳಿದ್ದು ದೂರುದಾರರು ಮೊದಲನೆಯ ಮಗನಾಗಿದ್ದು, ಸುನೀಲ್ ಕುಮಾರ.ಆರ್ ಈತನು ನಾಲ್ಕನೆಯ ಮಗನಾಗಿರುತ್ತಾನೆಂದು, ತಂದೆ-ತಾಯಿಯವರು ಸುಮಾರು ವರ್ಷಗಳ ಹಿಂದೆ ಅನಾರೋಗ್ಯದಿಂದ ಮೃತ ಪಟ್ಟಿರುವುದಾಗಿ ತಿಳಿಸಿರುತ್ತಾನೆ.

ದೂರುದಾರರ ತಮ್ಮನಾದ ಆರ್.ಸುನೀಲ್ ಕುಮಾರ ಈತನು ಹಾಲಿ ಕುಟುಂಬದವರೊಂದಿಗೆ ವಾಸವಾಗಿರದೆ ಕೊತ್ತನೂರಿನಲ್ಲಿರುವ ಕ್ರಿಸ್ತು ಜಯಂತಿ ಕಾಲೇಜ್ ಮುಂಭಾಗದಲ್ಲಿರುವ ಶ್ರೀನಿಧಿ ಪಿ.ಜಿ ಯಲ್ಲಿ ವಾಸವಾಗಿರುತ್ತಾನೆಂದು ತಿಳಿಸಿರುತ್ತಾರೆ.

ದಿನಾಂಕ:07/03/2025 ರಂದು ರಾತ್ರಿ ಸುಮಾರು 09–00 ಗಂಟೆ ಸಮಯದಲ್ಲಿ ದೂರುದಾರರಿಗೆ ಕೊತ್ತನೂರು ಪೊಲೀಸ್ ಠಾಣೆಯಿಂದ ಕರೆಮಾಡಿ ನಿಮ್ಮ ತಮ್ಮನು ಹಾಲಿ ವಾಸವಿದ್ದ ಕ್ರಿಸ್ತು ಜಯಂತಿ ಕಾಲೇಜ್ ಮುಂಭಾಗದಲ್ಲಿರುವ ಶ್ರೀನಿಧಿ ಪಿ.ಜಿ ಯಲ್ಲಿರುವ ರೂಮಿನಲ್ಲಿ ಬೇಡ್ ಶೀಟ್ ನಿಂದ ಫಾನ್‌ಗೆ ನೇಣು ಹಾಕಿಕೊಂಡು ಮೃತಪಟ್ಟಿರುತ್ತಾರೆ ನಂತರ ಬೇಡ್ ಶೀಟ್ ಕಟ್ ಮಾಡಿ ಮೃತದೇಹವನ್ನು ಕೆಳಗೆ ಇಳಿಸಿ, ಮೃತದೇಹವನ್ನು ಡಾ.ಬಿ.ಆರ್.ಅಂಬೇಡ್ಕರ್ ಮೆಡಿಕಲ್ ಕಾಲೇಜ್ ಆಸ್ಪತ್ರೆಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಶವಾಗಾರದಲ್ಲಿ ಇರಿಸಿರುತ್ತಾರೆಂದು ತಿಳಿಸಿರುತ್ತಾರೆ.

ದೂರುದಾರರು ಠಾಣೆಗೆ ಹಾಜರಾಗಿ, ವಿಚಾರಣೆ ವೇಳೆಯಲ್ಲಿ ನನ್ನ ಮೃತ ತಮ್ಮನು ಈ ಹಿಂದೆ ಯಾವುದೋ ವಿಷಯವನ್ನು ಮನಸ್ಸಿನಲ್ಲಿಟ್ಟುಕೊಂಡು 02 ಬಾರಿ ಆತ್ಮಹತ್ಯೆಗೆ ಪ್ರಯತ್ನ ಮಾಡಿರುತ್ತಾನೆಂದು ಹೇಳಿಕೆ ನೀಡಿರುತ್ತಾರೆ. ಇವರು ತಮ್ಮನು ಯಾವುದೇ ವಿಷಯವನ್ನು ಯಾರೊಬ್ಬರಿಗೂ ತಿಳಿಸದೆ ತಾನೊಬ್ಬನೆ ಮನಸ್ಸಿನಲ್ಲಿಟ್ಟುಕೊಂಡು ಮಾನಸಿಕ ಖಿನ್ನತೆಗೆ ಒಳಗಾಗಿ ಜೀವನದಲ್ಲಿ ಜಿಗುಪ್ಸೆಗೊಂಡು ತಾನೇ ನೇಣು ಹಾಕಿಕೊಂಡು ಮೃತಪಟ್ಟಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ತನ್ನ ತಮ್ಮನ ಸಾವಿಗೆ ಬೇರೆ ಏನೂ ಕಾರಣವಿರುವುದಿಲ್ಲವೆಂದು ವಿಚಾರಣೆಯಲ್ಲಿ ತಿಳಿಸಿರುತ್ತಾನೆ.

ದೂರದಾರರು ತನ್ನ ತಮ್ಮನ ಸಾವಿನ ಬಗ್ಗೆ ನಿಖರವಾದ ಕಾರಣ ತಿಳಿಯಲು ಮರಣೋತ್ತರ ಪರೀಕ್ಷೆ ಮಾಡಿಸಿ, ತನಿಖೆ ಕೈಗೊಂಡು ಮುಂದಿನ ಕಾರ್ಯಕ್ಕೆ ಮೃತದೇಹವನ್ನು ಶೀಘ್ರವಾಗಿ ತನ್ನ ವಶಕ್ಕೆ ಹಸ್ತಾಂತರಿಸಬೇಕೆಂದು ಕೋರಿರುತ್ತಾರೆ. ಸದರಿ ದೂರಿನನ್ವಯ ಕೊತ್ತನೂರು ಪೊಲೀಸ್ ಠಾಣೆ ಯುಡಿಆರ್ ನಂ.05/2025 ಕಲಂ 194 ಬಿ.ಎನ್.ಎಸ್.ಎಸ್ ರೀತ್ಯ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿರುತ್ತದೆ.

**ಯುಡಿಆರ್ ಪ್ರಕರಣದ ತನಿಖೆಯ ವಿವರಗಳು:**

ಪ್ರಕರಣದ ತನಿಖಾ ವೇಳೆಯಲ್ಲಿ ಘಟನಾ ಸ್ಥಳಕ್ಕೆ SOCO ತಂಡವು ಭೇಟಿ ನೀಡಿ ಪರಿಶೀಲನೆ ನಡೆಸಿರುತ್ತಾರೆ. ತನಿಖಾ ವೇಳೆಯಲ್ಲಿ ಮೃತನು ಯಾವುದೇ ಮಾದಕ ವಸ್ತುವನ್ನು ಸೇವನೆ ಮಾಡಿರುವುದು ಕಂಡುಬಂದಿರುವುದಿಲ್ಲ. ಮೃತನು ಹಿಂದಿನಿಂದಲೂ ಸಣ್ಣಪುಟ್ಟ ಕಳ್ಳತನ ಮಾಡುತ್ತಿದ್ದನೆಂದು ಮಾಹಿತಿ ತಿಳಿದುಬಂದಿರುತ್ತದೆ. ದಿನಾಂಕ:–08–03–2025 ಡಾ॥ ಬಿ.ಆರ್.ಅಂಬೇಡ್ಕರ್ ಮೆಡಿಕಲ್ ಕಾಲೇಜ್ ಆಸ್ಪತ್ರೆಯಲ್ಲಿ ಶವ ಪರೀಕ್ಷೆ ಮಾಡಿಸಿದ್ದು, ಶವ ಪರೀಕ್ಷಾ ವರದಿ ಬರುವುದು ಬಾಕಿ ಇರುತ್ತದೆ. ಪ್ರಸ್ತುತ ಪ್ರಕರಣವು ತನಿಖೆಯಲ್ಲಿ ಇರುತ್ತದೆ.

➢ **ಬೆಂಗಳೂರು ನಗರ ಸೇರಿದಂತೆ ರಾಜ್ಯಾದ್ಯಂತ ಮಾದಕ ವಸ್ತು ಮಾರಾಟ ಮತ್ತು ಸೇವನೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಈ ಕೆಳಕಂಡ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:–**

- ಸಾರ್ವಜನಿಕ ಸ್ಥಳಗಳು, ಜನಸಂದಣಿ ಪ್ರದೇಶಗಳು ಹಾಗೂ ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ

ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಲ್ಲದೆ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗಿದೆ.

- ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ: 1908 ಕ್ಕೆ ಸಂಪರ್ಕಿಸಿ ಪೊಲೀಸರಿಗೆ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ. ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.
- ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಕಾರ್ಯಗಾರಗಳನ್ನು ನಡೆಸಿ, ಉಪನ್ಯಾಸ, ದೃಶ್ಯರೂಪಕಗಳ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಶಾಲಾ-ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಹಾಗೂ ಸೇವನೆ ಮಾಡುವವರ ವಿರುದ್ಧ ತ್ವರಿತವಾಗಿ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ.
- ನಗರದಲ್ಲಿ ಪ್ರತಿಷ್ಠಿತ ಹೋಟೆಲ್, ಪಬ್‌ಗಳಲ್ಲಿ ರಾತ್ರಿ ಪಾರ್ಟಿಗಳನ್ನು ನಡೆಸಿ ಅಲ್ಲಿಗೆ ಆಗಮಿಸುತ್ತಿದ್ದವರಿಗೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ವ್ಯವಸ್ಥಿತ ಜಾಲವನ್ನು ಪತ್ತೆ ಮಾಡಿ ಅವರನ್ನು ದಸ್ತಗಿರಿ ಮಾಡಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.
- ಜನರು ಹೆಚ್ಚಾಗಿ ಸೇರುವ ಸ್ಥಳಗಳಾದ ಬಾರ್ ಮತ್ತು ರೆಸ್ಟೋರೆಂಟ್, ಪಬ್, ಡ್ಯಾನ್ಸ್ ಬಾರ್, ಶಾಲಾ-ಕಾಲೇಜು ಆವರಣ, ಬಸ್ ನಿಲ್ದಾಣ ಹಾಗು ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತಿದೆ. ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ವಿದ್ಯುನ್ಮಾನ ಜಾಗೃತಿ ಫಲಕಗಳು ಹಾಗೂ ಪೋಸ್ಟರ್‌ಗಳನ್ನು ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ ಮತ್ತು ಕಿರುಚಿತ್ರಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.
- ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಎಲ್ಲಾ ಕಡೆ ಸೂಕ್ಷವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು ಹಾಗೂ ಪತ್ತೆ ಮಾಡಲು, ಹದಿಯರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಸಾಧ್ಯವಿರುವ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಲಾಗುತ್ತಿದೆ.
- ನಗರಕ್ಕೆ ಮಾದಕ ವಸ್ತುಗಳು ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. ಡಾರ್ಕ್ ನೆಟ್ Darknet/Internet ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.
- ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್ ಕಾಯ್ದೆ-1985ರಡಿ ಪ್ರಕರಣಗಳಲ್ಲಿ ಭಾಗಿಯಾದ ಅಥವಾ ಹವ್ಯಾಸಿ ಆರೋಪಿತರನ್ನು PIT-NDPS ಕಾಯ್ದೆ-1988ರ ಅಡಿಯಲ್ಲಿ ಸುಮಾರು 13 ಆರೋಪಿತರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

- ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಮತ್ತು ಇತರೆ ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.
- ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳು ಸರಬರಾಜಾಗುತ್ತಿವೆ ಎಂಬುವುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ.
- ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಈ ಬಗ್ಗೆ ಬಾತ್ಮಿದಾರರಿಗೂ ಸಹ ಮಾಹಿತಿಯನ್ನು ನೀಡುವಂತೆ ಸೂಚಿ ಸಲಾಗಿರುತ್ತದೆ. ಈ ಸಲುವಾಗಿ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿರುವ ಅಧಿಕಾರಿ ಸಿಬ್ಬಂದಿಗಳಿಗೆ ಮಾದಕ ದ್ರವ್ಯ (ಡ್ರಗ್ಸ್) ಗಳ ಮಾರಾಟ ಮತ್ತು ಮಾದಕ ದ್ರವ್ಯ ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸುವಂತೆ, ಸೂಕ್ತ ತಿಳುವಳಿಕೆ ನೀಡಲಾಗುತ್ತಿದೆ.
- ಮಾದಕ ವಸ್ತುಗಳನ್ನು ಬೆಳೆಯುವ ಪ್ರದೇಶ ಮತ್ತು ಸಿಂಥೆಟಿಕ್ ಡ್ರಗ್ಸ್‌ಗಳನ್ನು ತಯಾರಿಸುವ ಲ್ಯಾಬ್‌ಗಳ ಹಾಗೂ ಸಂಗ್ರಹಿಸಿಟ್ಟಿದ್ದ ಸಂಗ್ರಹಗಾರಗಳ ಮೇಲೆ ದಾಳಿ ಮಾಡಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆ.
- ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ ಆರೋಪಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಿ NDPS Chapter-V ರಡಿಯಲ್ಲಿ ನಾಲ್ಕು ಡ್ರಗ್ಸ್ ಪೆಡ್ಲರ್‌ಗಳ ಸ್ಥಿರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.
- ಬೆಂಗಳೂರು ನಗರಾದ್ಯಂತ ಮಾದಕ ವಸ್ತುಗಳ ಮಾರಾಟ ಮತ್ತು ಸೇವನೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ 2024 ನೇ ಸಾಲಿನಲ್ಲಿ ಪೊಲೀಸ್ ಆಯುಕ್ತರನ್ನೊಳಗೊಂಡಂತೆ ಒಟ್ಟು 5,613 ಪೊಲೀಸ್ ಅಧಿಕಾರಿಗಳು ಸುಮಾರು 4,430 ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ 6,06,198 ಶಾಲಾ-ಕಾಲೇಜು ಹಾಗೂ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮತ್ತು 2025ರಲ್ಲಿ ಇಲ್ಲಿಯವರೆಗೂ 446 ಪೊಲೀಸ್ ಅಧಿಕಾರಿಗಳು ಸುಮಾರು 347 ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ 3,816 ಶಾಲಾ-ಕಾಲೇಜು ಹಾಗೂ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಲಾಗಿದೆ.
- ಸುಮಾರು 2519 ವಿದ್ಯಾರ್ಥಿಗಳನ್ನೊಳಗೊಂಡ ಮಾರ್ಷಲ್‌ಗಳನ್ನು ನೇಮಕ ಮಾಡಿಕೊಂಡು ಅವರ ಮೂಲಕ ಮಾದಕ ವಸ್ತುಗಳ ಕುರಿತು ಅರಿವು ಮೂಡಿಸುವ ಸಭೆಗಳನ್ನು ನಡೆಸಿ ಜಾಗೃತಿ ಮೂಡಿಸಲಾಗಿರುತ್ತದೆ.

ಒಇ 14 ಪಿಎನ್‌ಡಿ 2025(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು